# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ , ಬಿ. ಹೆಚ್. ರಸ್ತೆ , ತುಮಕೂರು-572 103 ☎:0816-2255650,2273511 ಫ್ಯಾಕ್ಸ್:0816-2270719


ಸಂಖ್ಯೆ:ತುವಿ:ಪವಿ:2025–26: 137

ದಿನಾಂಕ:20.05.2025

# : ಸುತ್ತೋಲೆ :

**ವಿಷಯ : ಕೋವಿಡ್ – 19 ರ ಕಾರಣದಿಂದಾಗಿ ಪರೀಕ್ಷೆ ಇಲ್ಲದೇ ಉನ್ನತೀಕರಣಗೊಳಿಸುವ ಸೌಲಭ್ಯದ ಕುರಿತು.**

**ಉಲ್ಲೇಖ** : 1. ಈ ಕಚೇರಿ ಸುತ್ತೋಲೆ ಸಂಖ್ಯೆ:ತುವಿ:ಪವಿ:ವಿನಿ–03:2023-24/543 ದಿನಾಂಕ:16.09.2023
2. ವಿದ್ಯಾರ್ಥಿಗಳ ಮನವಿ ಪತ್ರದ ದಿನಾಂಕ:13.05.2025

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025 ರ ಜನವರಿ–ಮಾರ್ಚ್ ಮಾಹೆಗಳಲ್ಲಿ ನಡೆದ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳಲ್ಲಿ ಉತ್ತೀರ್ಣರಾದ 2019-20 ನೇ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳನ್ನು ವಿಶ್ವವಿದ್ಯಾನಿಲಯವು ಕೊನೆಯದಾಗಿ ಪರೀಕ್ಷೆ ಇಲ್ಲದೇ ಹಾಗೆ ಪ್ರಮೋಟ್ ಮಾಡಿ ಎರಡು ಮತ್ತು ನಾಲ್ಕನೇ ಸೆಮಿಸ್ಟರ್‌ನ ಫಲಿತಾಂಶವನ್ನು ಪ್ರಕಟಿಸುವಂತೆ ಉಲ್ಲೇಖ (2) ರ ಪತ್ರದಲ್ಲಿ ಹಲವು ವಿದ್ಯಾರ್ಥಿಗಳು ಕೋರಿರುತ್ತಾರೆ. ಸದರಿ ಪತ್ರವನ್ನು ಪರಿಶೀಲಿಸಲಾಗಿದ್ದು ಇದಕ್ಕೆ ಸಂಬಂಧಪಟ್ಟಂತೆ ಉಲ್ಲೇಖ (1) ರ ಈ ಕಚೇರಿ ಸುತ್ತೋಲೆಯಲ್ಲಿ ಕೆಳಕಂಡಂತೆ ತಿಳಿಸಲಾಗಿರುತ್ತದೆ.

“2018-19, 2019-20 ಮತ್ತು 2020-21 ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಸ್ನಾತಕ ಪದವಿಗಳಿಗೆ ಪ್ರವೇಶ ಪಡೆದು ಪ್ರಥಮ ಮತ್ತು ದ್ವಿತೀಯ ಸೆಮಿಸ್ಟರ್‌ಗಳ ವಿವಿಧ ವಿಷಯಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ 2023-24 ನೇ ಸಾಲಿನಲ್ಲಿ ನಡೆಯುವ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ಪರೀಕ್ಷೆಗಳೊಂದಿಗೆ (ಸೈದ್ಧಾಂತಿಕ ಮತ್ತು ಪ್ರಾಯೋಗಿಕ) ಪರೀಕ್ಷೆಯನ್ನು ಬರೆಯಲು ಅಂತಿಮ ಅವಕಾಶ ಕಲ್ಪಿಸಲಾಗಿತ್ತು. ಸದರಿ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಉತ್ತೀರ್ಣರಾದಲ್ಲಿ ಮಾತ್ರ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ ಫಲಿತಾಂಶದ ಆಧಾರದ ಮೇಲೆ ಎರಡು ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಫಲಿತಾಂಶವನ್ನು ಸರ್ಕಾರದ ಮಾರ್ಗಸೂಚಿ ಹಾಗೂ ವಿಶ್ವವಿದ್ಯಾನಿಲಯದ ನಿಯಮಾವಳಿಗನುಗುಣವಾಗಿ ಪ್ರಕಟಿಸಲಾಗುವುದು. ಸದರಿ ವಿದ್ಯಾರ್ಥಿಗಳು ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ ಯಾವುದೇ ವಿಷಯದಲ್ಲಿ ಅನುತ್ತೀರ್ಣರಾದಲ್ಲಿ, ಅವರುಗಳನ್ನು ಪೂರಕ ವಿದ್ಯಾರ್ಥಿಗಳೆಂದು ಪರಿಗಣಿಸಿ, ಅವರುಗಳು ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ನ ಎಲ್ಲಾ ವಿಷಯಗಳ (ಸೈದ್ಧಾಂತಿಕ ಮತ್ತು ಪ್ರಾಯೋಗಿಕ) ಪರೀಕ್ಷೆಗಳನ್ನು ಪರೀಕ್ಷೆ ತೆಗೆದುಕೊಂಡೇ ಉತ್ತೀರ್ಣರಾಗಬೇಕಾಗುತ್ತದೆ”.

ಮುಂದುವರೆದು, 2018-19, 2019-20 ಮತ್ತು 2020-21 ನೇ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳಿಗೆ 2023-24 ನೇ ಸಾಲಿನಲ್ಲಿ ಕಲ್ಪಿಸಲಾಗಿರುವ ಅವಕಾಶವನ್ನು ಹೊರತುಪಡಿಸಿ ಯಾವುದೇ ಕಾರಣಕ್ಕೂ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶಕ್ಕನುಗುಣವಾಗಿ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಫಲಿತಾಂಶವನ್ನು ಪಡೆಯಲು ಅರ್ಹರಾಗಿರುವುದಿಲ್ಲ. ಅವರುಗಳನ್ನು ಮುಂಬರುವ ಎಲ್ಲಾ ಪರೀಕ್ಷೆಗಳಿಗೂ ಪೂರಕ ವಿದ್ಯಾರ್ಥಿಗಳೆಂದೇ ಪರಿಗಣಿಸಲಾಗುವುದು.

ಸದರಿ ಸೌಲಭ್ಯವನ್ನು ಸಂಬಂಧಪಟ್ಟಂತಹ ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಲು ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಘಟಕ/ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ **2018-19, 2019-20 ಮತ್ತು 2020-21 ನೇ ಶೈಕ್ಷಣಿಕ ಸಾಲಿನ ವಿದ್ಯಾರ್ಥಿಗಳಿಗೆ ಈಗಾಗಲೇ 2023-24 ನೇ ಶೈಕ್ಷಣಿಕ ಸಾಲಿನಲ್ಲಿ ಅಂತಿಮ ಅವಕಾಶ ನೀಡಲಾಗಿರುವುದರಿಂದ 2024-25 ನೇ ಶೈಕ್ಷಣಿಕ ಸಾಲಿನ 2025 ರ ಜನವರಿ–ಮಾರ್ಚ್ ಮಾಹೆಗಳಲ್ಲಿ ನಡೆದ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳಲ್ಲಿ ಉತ್ತೀರ್ಣರಾಗಿದ್ದರೂ ಸಹ ಕೋವಿಡ್–19 ರ ಕಾರಣದಿಂದಾಗಿ ಪರೀಕ್ಷೆ ಇಲ್ಲದೇ ಉನ್ನತೀಕರಣಗೊಳಿಸುವ ಸೌಲಭ್ಯ ಅನ್ವಯಿಸದೇ ಇರುವುದರಿಂದ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಪರೀಕ್ಷೆಗಳನ್ನು ಪರೀಕ್ಷಾ ಶುಲ್ಕ ಪಾವತಿಸಿ ಪರೀಕ್ಷೆ ತೆಗೆದುಕೊಂಡೇ (ಸೈದ್ಧಾಂತಿಕ ಮತ್ತು ಪ್ರಾಯೋಗಿಕ) ಉತ್ತೀರ್ಣರಾಗಬೇಕಾಗಿರುತ್ತದೆ** ಎಂಬುದನ್ನು ಕಡ್ಡಾಯವಾಗಿ ಸಂಬಂಧಪಟ್ಟ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಈ ಮೂಲಕ ತಮಗೆ ತಿಳಿಸಲಾಗಿದೆ.

**ಅಡಕ :** ಉಲ್ಲೇಖ (1) ರ ಸುತ್ತೋಲೆ ಪ್ರತಿ.

22/5/25

ಕುಲಸಚಿವರು(ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು.

ಗೆ,

ಪ್ರಾಂಶುಪಾಲರುಗಳು, ಘಟಕ/ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು :**

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಉಪಕುಲಸಚಿವರು, ಶೈಕ್ಷಣಿಕ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. – **ಇಂದೇ ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಘಟಕ/ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳಿಗೆ ಇ–ಮೇಲ್ ಕಳುಹಿಸುವುದು.**
5. ಗಣಕಯಂತ್ರ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಚೇರಿ ಪ್ರತಿ.

ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು–572 103 ☎:0816 – 2255650, 2273511 ಫ್ಯಾಕ್ಸ್: 0816–2270719

ಸಂಖ್ಯೆ:ತುವಿ: ಪ.ವಿ:ವಿ.ನಿ.–03–2023–24: 543 ದಿನಾಂಕ: 16.09.2023

# ಸುತ್ತೋಲೆ

ವಿಷಯ: ಕೋವಿಡ್–19 ರ ಕಾರಣದಿಂದಾಗಿ ಪರೀಕ್ಷೆ ಇಲ್ಲದೆ ಉನ್ನತೀಕರಣಗೊಳಿಸುವ ಸೌಲಭ್ಯದ ಕುರಿತು.

ಉಲ್ಲೇಖ: 1. ಪರಿಷ್ಕೃತ ಅಧಿಸೂಚನೆ ಸಂಖ್ಯೆ: ತು.ವಿ:ಪ.ವಿ:2022–23/365 ದಿನಾಂಕ:16.08.2022
2. ಸುತ್ತೋಲೆ ಸಂಖ್ಯೆ:ತುವಿ:ಪ.ವಿ:2022–23/397 ದಿನಾಂಕ:02.12.2022
3. ಸುತ್ತೋಲೆ ಸಂಖ್ಯೆ:ತುವಿ:ಪ.ವಿ:2023–24/ ದಿನಾಂಕ:27.07.2023
4. ಸುತ್ತೋಲೆ ಸಂಖ್ಯೆ:ತುವಿ:ಪ.ವಿ:2023–24/398 ದಿನಾಂಕ:12.08.2023
5. ಸುತ್ತೋಲೆ ಸಂಖ್ಯೆ:ತುವಿ:ಪ.ವಿ:2023–24/412 ದಿನಾಂಕ:14.08.2023
6. ವಿವಿಧ ದಿನಾಂಕಗಳಲ್ಲಿ ವಿದ್ಯಾರ್ಥಿಗಳು ಸಲ್ಲಿಸಿರುವ ಮನವಿ ಪತ್ರಗಳು
7. ಮೊದಲನೇ ಸಾಮಾನ್ಯ ಸಿಂಡಿಕೇಟ್ ಸಭಾ ನಡವಳಿ ದಿನಾಂಕ: 30.08.2023
8. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 12.09.2023

* * * * * * *

ಸೆಪ್ಟೆಂಬರ್–2020 ಮತ್ತು ಸೆಪ್ಟೆಂಬರ್/ಅಕ್ಟೋಬರ್–2021 ರ ಮಾಹೆಗಳಲ್ಲಿನ II & IV ನೇ ಸೆಮಿಸ್ಟರ್‌ಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಯು.ಜಿ.ಸಿ. ಹಾಗೂ ರಾಜ್ಯ ಸರ್ಕಾರದ ಕೋವಿಡ್–19 ಮಾರ್ಗಸೂಚಿಯನುಸಾರ ವಿಶ್ವವಿದ್ಯಾನಿಲಯದ ಎಲ್ಲಾ ವಿವಿಧ ಸ್ನಾತಕ ಪದವಿಗಳ ಎರಡು ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ***ಪರೀಕ್ಷಾ ಶುಲ್ಕವನ್ನು ಪಾವತಿಸಿದಂತಹ ಅರ್ಹ ವಿದ್ಯಾರ್ಥಿಗಳ*** ಪರೀಕ್ಷಾ ಫಲಿತಾಂಶಗಳನ್ನು ಕ್ರಮವಾಗಿ ಅವರ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್ ಪರೀಕ್ಷಾ ಫಲಿತಾಂಶಗಳ ಆಧಾರದ ಮೇಲೆ ಫಲಿತಾಂಶ ಪ್ರಕಟಿಸಲಾಗಿರುತ್ತದೆ. ಅಂದರೆ ವಿದ್ಯಾರ್ಥಿ ಪ್ರಥಮ ಸೆಮಿಸ್ಟರ್‌ನಲ್ಲಿ ಉತ್ತೀರ್ಣನಾಗಿದ್ದರೆ ಎರಡನೇ ಸೆಮಿಸ್ಟರ್ ಕೂಡ ನಿಯಮಾನುಸಾರ ಅಂಕಗಳ ಲೆಕ್ಕಚಾರ ಮಾಡಿ ಫಲಿತಾಂಶ ಪ್ರಕಟಿಸಲಾಗಿರುತ್ತದೆ. ಇದೇ ಮಾದರಿಯನ್ನೂ ಮೂರನೇ ಸೆಮಿಸ್ಟರ್‌ನಿಂದ ನಾಲ್ಕನೇ ಸೆಮಿಸ್ಟರ್‌ಗೂ ಅನ್ವಯಿಸಲಾಗಿದೆ.

**2018–19 ಮತ್ತು 2019–20 ನೇ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕ ಪದವಿಯ ಪ್ರಥಮ ವರ್ಷಕ್ಕೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೆ ಉನ್ನತೀಕರಣಗೊಳಿಸುವ ಸಮಯಾಕಾಶವು ಪೂರ್ಣಗೊಂಡಿರುತ್ತದೆ. ಮಾರ್ಚ್/ಏಪ್ರಿಲ್–2023 ರಲ್ಲಿ ನಡೆದ ಮೊದಲನೇ ಮತ್ತು ಮೂರನೇ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶವನ್ನು ಈಗಾಗಲೇ ಪ್ರಕಟಿಸಲಾಗಿರುತ್ತದೆ. ಸದರಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತೀರ್ಣಗೊಂಡರೆ ಸದರಿ ಫಲಿತಾಂಶದ ಆಧಾರದ ಮೇಲೆ ಎರಡು ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸಲು ಕ್ರಮಕೈಗೊಳ್ಳಲಾಗಿದೆ. ಆದಾಗ್ಯೂ ಅನುತ್ತೀರ್ಣಗೊಂಡರೆ ಪೂರಕ ವಿದ್ಯಾರ್ಥಿಯೆಂದು ಪರಿಗಣಿಸಲಾಗುವುದು.**

**ಇಂತಹ ಪೂರಕ ವಿದ್ಯಾರ್ಥಿಗಳಿಗೆ ಪ್ರಸ್ತುತ ಆಗಸ್ಟ್/ಸೆಪ್ಟೆಂಬರ್–2023 ರ ಮಾಹೆಗಳಲ್ಲಿ ನಡೆಯಲಿರುವ ಎರಡು ಮತ್ತು ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಪೂರಕ ಪರೀಕ್ಷಾ ಶುಲ್ಕವನ್ನು ಪಾವತಿಸಿ ಪರೀಕ್ಷೆಯನ್ನು ತೆಗೆದುಕೊಳ್ಳಬೇಕೆಂದು ಉಲ್ಲೇಖ (3), (4) & (5) ರ ಸುತ್ತೋಲೆಗಳಲ್ಲಿ ತಿಳಿಸಲಾಗಿರುತ್ತದೆ.**

**ಪ್ರಸ್ತುತ 2018–19 ಮತ್ತು 2019–20 ನೇ ಶೈಕಣಿಕ ಸಾಲಿನಲ್ಲಿ ಸ್ನಾತಕ ಪದವಿಯ ಪ್ರಥಮ ವರ್ಷಕ್ಕೆ ದಾಖಲಾದ ಅನೇಕ ವಿದ್ಯಾರ್ಥಿಗಳು ಪರೀಕ್ಷಾಂಗ ವಿಭಾಗಕ್ಕೆ ಮನವಿ ಸಲ್ಲಿಸಿ, ಪರೀಕ್ಷೆ ಇಲ್ಲದೆ ಉನ್ನತೀಕರಣ ಸೌಲಭ್ಯವನ್ನು ಪಡೆಯಲು ನಮಗೆ ಮತ್ತೊಂದು ಅವಕಾಶವನ್ನು ನೀಡಬೇಕೆಂದು ಕೋರಿರುತ್ತಾರೆ. ಸದರಿ ವಿಷಯದ ಕುರಿತು ಚರ್ಚಿಸುವ ಸಂಬಂಧ ಈ ವಿಷಯವನ್ನು ದಿನಾಂಕ: 07.09.2023 ರಂದು ನಡೆದ ಪ್ರಥಮ ಸಾಮಾನ್ಯ ಸಿಂಡಿಕೇಟ್ ಸಭೆಯ ಮುಂದೆ ಮಂಡಿಸಲಾಗಿ, ಸಭೆಯು ಈ ಕೆಳಕಂಡಂತೆ ನಿರ್ಣಯಿಸಿರುತ್ತದೆ.**

**" 2018–19 ಮತ್ತು 2019–20 ನೇ ಸಾಲಿನಲ್ಲಿ ಪ್ರವೇಶ ಪಡೆದು ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ನಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಆ ಸೆಮಿಸ್ಟರ್‌ಗಳ ಫಲಿತಾಂಶಕ್ಕನುಗುಣವಾಗಿ ಎರಡನೇ ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಫಲಿತಾಂಶವನ್ನು ಪ್ರಕಟಿಸಲು ಈ ಹಿಂದೆ ಅವಕಾಶ ಕಲ್ಪಿಸಲಾಗಿತ್ತು. ಸದರಿ ವಿದ್ಯಾರ್ಥಿಗಳಿಗೆ ಈಗಾಗಲೇ ಎರಡು ಬಾರಿ ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು. ಆದರೂ 2018–19 ಮತ್ತು 2019–20ನೇ ಸಾಲಿನ ಅನೇಕ ವಿದ್ಯಾರ್ಥಿಗಳು ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ ವಿವಿಧ ವಿಷಯಗಳಲ್ಲಿ ಅನುತ್ತೀರ್ಣರಾಗಿದ್ದು, ಮತ್ತೊಮ್ಮೆ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ಪರೀಕ್ಷೆಗಳನ್ನು ತೆಗೆದುಕೊಂಡು, ಅವುಗಳ ಫಲಿತಾಂಶಕ್ಕನುಗುಣವಾಗಿ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಫಲಿತಾಂಶವನ್ನು ಪಡೆಯಲು ಮನವಿಗಳನ್ನು ಸಲ್ಲಿಸಿರುವುದು ಸಭೆಯ ಗಮನಕ್ಕೆ ಬಂದಿರುತ್ತದೆ. ಈ ಸಂಬಂಧ ಕೂಲಂಕುಷವಾಗಿ ಪರಿಶೀಲಿಸಿದ ಸಭೆಯು ಕೆಳಕಂಡ ಷರತ್ತುಗಳಿಗೊಳಪಟ್ಟು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಒಂದು ಬಾರಿ ಮಾತ್ರ 2018–19, 2019–20 ಮತ್ತು 2020–21ನೇ ಸಾಲಿನ ವಿದ್ಯಾರ್ಥಿಗಳಿಗೆ 2023–24ನೇ ಸಾಲಿನಲ್ಲಿ ನಡೆಯುವ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ (ಸೈದ್ಧಾಂತಿಕ ಮತ್ತು ಪ್ರಾಯೋಗಿಕ) ಪರೀಕ್ಷೆಗಳೊಂದಿಗೆ ಪರೀಕ್ಷೆಯನ್ನು ಬರೆಯಲು ಹಾಗೂ ಅದರಂತೆ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ ಫಲಿತಾಂಶವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.**

**2018–19, 2019–20 ಮತ್ತು 2020–21 ನೇ ಸಾಲಿನಲ್ಲಿ ಪ್ರವೇಶ ಪಡೆದು ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ ವಿವಿಧ ವಿಷಯಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ 2023–24ನೇ ಸಾಲಿನಲ್ಲಿ ನಡೆಯುವ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ಪರೀಕ್ಷೆಗಳೊಂದಿಗೆ (ಸೈದ್ಧಾಂತಿಕ ಮತ್ತು ಪ್ರಾಯೋಗಿಕ) ಪರೀಕ್ಷೆಯನ್ನು ಬರೆಯಲು ಇದೊಂದು ಅಂತಿಮ ಅವಕಾಶ ಕಲ್ಪಿಸಲಾಗಿರುತ್ತದೆ. ಸದರಿ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಉತ್ತೀರ್ಣರಾದಲ್ಲಿ ಮಾತ್ರ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ ಫಲಿತಾಂಶದ ಆಧಾರದ ಮೇಲೆ ಎರಡು ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಫಲಿತಾಂಶವನ್ನು ಸರ್ಕಾರದ ಮಾರ್ಗಸೂಚಿ ಹಾಗೂ ವಿಶ್ವವಿದ್ಯಾನಿಲಯದ ನಿಯಮಗಳಿಗನುಗುಣವಾಗಿ ಪ್ರಕಟಿಸಲಾಗುವುದು. ಸದರಿ ವಿದ್ಯಾರ್ಥಿಗಳು ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ಗಳ ಯಾವುದೇ ವಿಷಯದಲ್ಲಿ ಅನುತ್ತೀರ್ಣರಾದಲ್ಲಿ, ಅವರುಗಳನ್ನು ಪೂರಕ ವಿದ್ಯಾರ್ಥಿಗಳೆಂದು ಪರಿಗಣಿಸಿ, ಅವರುಗಳು ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ನ ಎಲ್ಲಾ ವಿಷಯಗಳ (ಸೈದ್ಧಾಂತಿಕ ಮತ್ತು ಪ್ರಾಯೋಗಿಕ) ಪರೀಕ್ಷೆಗೆ ತೆಗೆದುಕೊಂಡೇ ಉತ್ತೀರ್ಣರಾಗಬೇಕಾಗುತ್ತದೆ.**

2018-19, 2019-20 ಮತ್ತು 2020-21ನೇ ಸಾಲಿನ ವಿದ್ಯಾರ್ಥಿಗಳು 2022-23ನೇ ಸಾಲಿನಲ್ಲಿ ಈಗಾಗಲೇ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಪರೀಕ್ಷಾ ಶುಲ್ಕವನ್ನು ಪಾವತಿಸಿ, ಪರೀಕ್ಷೆ ಬರೆದಿರುವ /ಬರೆಯುತ್ತಿರುವ ಎಲ್ಲಾ ಪರೀಕ್ಷಾ ಪ್ರಕ್ರಿಯೆಗಳನ್ನು ಸ್ಥಗಿತಗೊಳಿಸುವುದು.

2018-19, 2019-20 ಮತ್ತು 2020-21ನೇ ಸಾಲಿನಲ್ಲಿ ಪ್ರವೇಶ ಪಡೆದ ಸದರಿ ವಿದ್ಯಾರ್ಥಿಗಳಿಗೆ 2023-24ನೇ ಸಾಲಿನಲ್ಲಿ ಕಲ್ಪಿಸಲಾಗಿರುವ ಅವಕಾಶವನ್ನು ಹೊರತುಪಡಿಸಿ, ಅವರುಗಳು ಯಾವುದೇ ಕಾರಣಕ್ಕೂ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶಕ್ಕನುಗುಣವಾಗಿ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ಗಳ ಫಲಿತಾಂಶವನ್ನು ಪಡೆಯಲು ಅರ್ಹರಾಗಿರುವುದಿಲ್ಲ. ಅವರುಗಳನ್ನು ಮುಂಬರುವ ಎಲ್ಲಾ ಪರೀಕ್ಷೆಗಳಿಗೂ ಪೂರಕ ವಿದ್ಯಾರ್ಥಿಗಳೆಂದೇ ಪರಿಗಣಿಸಲಾಗುವುದು".

ಸದರಿ ಸಿಂಡಿಕೇಟ್ ಸಭಾ ನಿರ್ಣಯದನ್ವಯ 2018-19, 2019-20 ಮತ್ತು 2020-21ನೇ ಸಾಲಿನ ವಿದ್ಯಾರ್ಥಿಗಳಿಗೆ 2023-24ನೇ ಸಾಲಿನಲ್ಲಿ ನಡೆಯುವ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ (ಸೈದ್ಧಾಂತಿಕ ಮತ್ತು ಪ್ರಾಯೋಗಿಕ) ಪರೀಕ್ಷೆಗಳೊಂದಿಗೆ ಪರೀಕ್ಷೆಯನ್ನು ಬರೆಯಲು ಹಾಗೂ ಅದರಂತೆ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ ಫಲಿತಾಂಶವನ್ನು ಪಡೆಯಲು ಅಂತಿಮ ಅವಕಾಶವನ್ನು ನೀಡಲಾಗಿದ್ದು, ಸದರಿ ಸೌಲಭ್ಯವನ್ನು ಎಲ್ಲಾ ವಿದ್ಯಾರ್ಥಿಗಳು ಉಪಯೋಗಿಸಿಕೊಳ್ಳಬೇಕೆಂದು ಈ ಮೂಲಕ ಸೂಚಿಸಲಾಗಿದೆ.

2018-19, 2019-20 ಮತ್ತು 2020-21 ನೇ ಸಾಲಿನ ವಿದ್ಯಾರ್ಥಿಗಳು 2022-23ನೇ ಸಾಲಿನ ಆಗಸ್ಟ್/ಸೆಪ್ಟೆಂಬರ್-2023 ರ ಮಾಹೆಗಳಲ್ಲಿ ನಡೆಯುತ್ತಿರುವ ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್‌ಗಳಿಗೆ ಪರೀಕ್ಷಾ ಶುಲ್ಕವನ್ನು ಪಾವತಿಸಿ, ಪರೀಕ್ಷೆ ಬರೆದಿರುವ ವಿಷಯಗಳ ಎಲ್ಲಾ ಪರೀಕ್ಷಾ ಪ್ರಕ್ರಿಯೆಗಳನ್ನು ಸ್ಥಗಿತಗೊಳಿಸಲಾಗುವುದು.

**ಸದರಿ ವಿಷಯವನ್ನು ತಮ್ಮ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತರುವುದು ಹಾಗೂ ಈ ಕುರಿತು ಸೂಕ್ತ ಕ್ರಮವಹಿಸಲು ತಿಳಿಸಲಾಗಿದೆ.**

22/9/23.
ಕುಲಸಚಿವರು (ಪರೀಕ್ಷಾಂಗ)

ಗೆ,

ಪ್ರಾಂಶುಪಾಲರುಗಳು, ಘಟಕ ಕಾಲೇಜುಗಳು/ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು,
ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- (ಇಂದೇ ಅಂತರ್ಜಾಲದಲ್ಲಿ ಪ್ರಕಟಿಸುವುದು)
5. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಛೇರಿ ಪ್ರತಿ.